# ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಪನಹಳ್ಳಿ

ಸಿ ಸಿ ನಂಬರ 1214/2024

| ಸಿಡಬ್ಲ್ಯೂ | 2 | ಪಿಡಬ್ಲ್ಯೂ | 1 |
|---|---|---|---|

| | | |
|---|---|---|
| ಸಾಕ್ಷಿದಾರರ ಹೆಸರು | : | ಮಡಿವಾಳಪ್ಪ |
| ತಂದೆಯ ಹೆಸರು | : | ಕೊಟ್ರಬಸ್ಸಪ್ಪ |
| ವಯಸ್ಸು | : | 35 ವರ್ಷ ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು 16.07.2025 |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಹಗರಿ ಗಜಾಪುರ |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:-**

ನನಗೆ ಆರೋಪಿತನ ಪರಿಚಯ ಇರುವುದಿಲ್ಲಾ. ಈಗ್ಗೆ 1 ವರ್ಷದ ಹಿಂದೆ ನಾನು ಕೆಲಸಕ್ಕೆ ಹೋಗುತ್ತಿರುವಾಗ ಪೋಲೀಸರು ನನ್ನನ್ನು ಕರೆದಿರುತ್ತಾರೆ. ಪೋಲೀಸರ ಕೋರಿಕೆಯ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯು ಮಹಜರ ಆಗಿದ್ದು ಅದನ್ನು ಈಗ ನಿ ಪಿ 1 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿ ಪಿ 1(ಎ) ಎಂದು ಗುರುತಿಸಲಾಯಿತು. ನಿ ಪಿ 1 ರಲ್ಲಿ ಏನ ಬರೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ. ಆ ದಿನ ಸ್ಥಳದಲ್ಲಿ ಪೋಲೀಸರು ಪೋಟೋಗಳನ್ನು ತೆಗೆದಿರುತ್ತಾರೆ. ಯಾವ ಕಾರಣಕ್ಕಾಗಿ ಪೋಟೋಗಳನ್ನು ತೆಗೆದಿರುತ್ತಾರೆಂದು ನನಗೆ ಗೊತ್ತಿರುವುದಿಲ್ಲ.

**(ಈ ವೇಳೆಯಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸದರಿ ಸಾಕ್ಷಿಯು ಪೋಲೀಸರಿಗೆ ಕೊಟ್ಟಿರುವುದಾಗಿ ಹೇಳಲಾದ ಹೇಳಿಕೆಯನ್ನು ಪರಿಶೀಲಿಸಲಾಯಿತು. ಅದರಲ್ಲಿರುವ ಸಂಗತಿಗಳಿಗೆ ವ್ಯತಿರಿಕ್ತವಾಗಿ ಸಾಕ್ಷಿದಾರರು ಪುರಾವೆ ಹೇಳಿರುವುದರಿಂದ ಇವರನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ನ್ಯಾಯಾಲಯವು ಸಹಾಯಕ ಸರ್ಕಾರಿ ಅಭಿಯೋಜಕರಿಗೆ ಪಾಟೀ ಸವಾಲು ಮಾಡಲು ಅನುಮತಿಯನ್ನು ಕಲ್ಪಿಸಲಾಗಿದೆ.)**

**ಪಾಟೀ ಸವಾಲು ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-**

ದಿನಾಂಕ 16.05.2024 ರಂದು ಮುತ್ತಿಗೆ ಗ್ರಾಮದ ಕಜಡೆಯಿಂದ ಮತ್ತಿಹಳ್ಳಿ ಗ್ರಾಮದ ಕಡೆಗೆ ಹೋಗುವ ರಸ್ತೆಯು ಸಮೀಪದಲ್ಲಿ ಇರುವ ಕುಂಬಳಸರ ಹಳ್ಳದ ಬಳಿ ನನ್ನ ಹಾಗೂ ಚಾ

ಸಾ 3 ರವರ ಸಮಕ್ಷಮ ಚಾ ಸಾ 1 ರವರು ತೋರಿಸಿದ ಸ್ಥಳದಲ್ಲಿ ಚಾ ಸಾ 32 ರವರು ಮಧ್ಯಾಹ್ನ 1 ರಿಂದ 2 ಗಂಟೆಯವರೆಗೆ ನಿ ಪಿ 1 ರಂತೆ ಕೃತ್ಯ ಸ್ಥಳದ ಪಂಚನಾಮೆಯನ್ನು ಮತ್ತು ವಾಹನ ಜಪ್ತುಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಹೀರೋ ಕಂಪನಿಯು ಗ್ರೇ ಕಲರನ ಹೆಚ್ ಎಫ್ ಡಿಲಕ್ಸ ಮೋಟರ ಸೈಕಲ್ ನಂಬರ ಕೆ ಎ 35 ಇ ಆರ್ 4000 ವಾಹನವನ್ನು ನನ್ನ ಹಾಗೂ ಚಾ ಸಾ 3 ರವರ ಸಮಕ್ಷಮ ಚಾ ಸಾ 32 ರವರು ಜಪ್ತುಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು ಇರುವಂತಹ 6 ಛಾಯ ಚಿತ್ರಗಳನ್ನು ಸ್ಥಳದಲ್ಲಿ ತೆಗೆದಿರುತ್ತಾರೆ ಎಂದರೆ ಗೊತ್ತಿಲ್ಲಾ. ನಿ ಪಿ 1 ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ- ಇಲ್ಲ**

ಮರು ವಿಚಾರಣೆ ಇಲ್ಲಾಃ-

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಗಣಕೀಕೃತ ಗೊಳಿಸಲಾಯಿತು.)

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಹರಪನಹಳ್ಳಿ.